ಪ್ರೌಢಶಾಲಾ ಶಿಕ್ಷಕರ ನೇಮಕಾತಿ ಕುರಿತಂತೆ ತಿದ್ದುಪಡಿ ಕರಡು ಅಧಿಸೂಚನೆ ಹೊರಡಿಸಿದ್ದು ಅಂತಿಮ ಅಧಿಸೂಚನೆ ಹೊರಡಿಸಿದ ತಕ್ಷಣ ಭರ್ತಿ ಮಾಡಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು.

2) ಸಿಂಧನೂರು ತಾಲ್ಲೂಕಿನ ಪ್ರಾಥಮಿಕ ಶಾಲೆಗಳಲ್ಲಿ 144, ಪ್ರೌಢ ಶಾಲೆಗಳಲ್ಲಿ 47 ಹುದ್ದೆಗಳು ಖಾಲಿ ಇದ್ದು ಮುಂದಿನ ಶೈಕ್ಷಣಿಕ ವರ್ಷ ಪ್ರಾರಂಭಕ್ಕೆ ಮುನ್ನಾ ಈ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಉತ್ತರ ಕರ್ನಾಟಕದಲ್ಲಿ ಶಾಲಾ ಮಕ್ಕಳಿಗೆ ಮಧ್ಯಾಹ್ನ ಊಟದ ಯೋಜನೆ ಬಗ್ಗೆ

967 (1296) ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕರ್ನಾಟಕದ ಎಷ್ಟು ಜಿಲ್ಲೆಗಳಲ್ಲಿ ಶಾಲಾ ಮಕ್ಕಳ ಮಧ್ಯಾಹ್ನ ಊಟದ ಯೋಜನೆ ಜಾರಿಯಲ್ಲಿದೆ;

ಆ) ಈ ಯೋಜನೆ ಆರಂಭವಾದ ನಂತರ ಶಾಲೆಗೆ ಬರುವ ಮಕ್ಕಳ ಸಂಖ್ಯೆ ಹೆಚ್ಚಾಗಿದೆಯೇ; (ವಿವರ ನೀಡುವುದು)

ಇ) ಬಿಸಿ ಊಟ ಸೇವನೆಯಿಂದ ಮಕ್ಕಳು ಅಸ್ವಸ್ಥರಾದ ಪ್ರಕರಣಗಳು ಎಷ್ಟು; ಹಾಗಿದ್ದಲ್ಲಿ ಈ ಬಗ್ಗೆ ಏನು ಸುಧಾರಣ ಕ್ರಮ ಕೈಗೊಳ್ಳಲಾಗಿದೆ;

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಏಳು ಜಿಲ್ಲೆಗಳಲ್ಲಿ

ಆ) ಹಾಜರಾತಿ ಹೆಚ್ಚಾಗಿದೆ. ಶಾಲೆ ಬಿಡುವವರ ಸಂಖ್ಯೆ ಕಡಿಮೆಯಾಗಿದೆ. ಖಚಿತ ವಿವರವು ಯೋಜನೆಯನ್ನು ಮೌಲ್ಯಮಾಪನ ಮಾಡಿಸಿದ ನಂತರ ಗೊತ್ತಾಗುವುದು.

ಇ) ಶಹಾಪುರ ತಾಲ್ಲೂಕಿನ ದೋರಹಳ್ಳಿಯ ಒಂದು ಶಾಲೆಯಲ್ಲಿ ಮಾತ್ರ. ಸ್ವಚ್ಛತೆಯನ್ನು ಕಾಪಾಡಲು ಹಾಗೂ ಕಳಪೆ ಮಟ್ಟದ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡಿದಲ್ಲಿ ಅವುಗಳನ್ನು ನಿರಾಕರಿಸಲು ಸೂಕ್ತ ಸೂಚನೆಯನ್ನು ಎಲ್ಲಾ ಶಾಲಾ ಮುಖ್ಯೋಪಾಧ್ಯಾಯರಿಗೆ ನೀಡಿದೆ.

ಹುಬ್ಬಳ್ಳಿಯ ಕಿಮ್ಸ್ ಸಂಸ್ಥೆಯಲ್ಲಿ ನೇಮಕಾತಿ ಅವ್ಯವಹಾರ

968 (1666) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹೈದರ್‌ಖಾನ್ (ಹುಬ್ಬಳ್ಳಿ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕರ್ನಾಟಕ ಪ್ರತಿಷ್ಠಿತ ಆಸ್ಪತ್ರೆಯಾದ ಕಿಮ್ಸ್ ಸಂಸ್ಥೆಯಲ್ಲಿ ನೇಮಕಾತಿಗಳನ್ನು ನೇಮಕಾತಿ ನಿಯಮ ಅನುಸಾರ ಮಾಡದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ನೇಮಕಾತಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ.

ಇ) ನೇಮಕಾತಿ ಪ್ರಕ್ರಿಯೆಯಲ್ಲಿ ಕಿಮ್ಸ್ ಅಧಿಕಾರಿಗಳು ತಪ್ಪೆಸಗಿರುವುದು ನಿಜವೆ? ಮತ್ತು ನೇಮಕಾತಿ ವಿಷಯದಲ್ಲಿ ಅವ್ಯವಹಾರದ ಸಂಬಂಧವಾಗಿ ತಪ್ಪು ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು?